# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ. ಹೆಚ್. ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪವಿ:2025-26/1102

ದಿನಾಂಕ:28.01.2026

## : ಅಧಿಸೂಚನೆ :

**BVA**

ವಿಷಯ : 2025-26 ನೇ ಶೈಕ್ಷಣಿಕ ಸಾಲಿನ 2026 ರ ಫೆಬ್ರವರಿ ಮಾಹೆಯಲ್ಲಿ ನಡೆಯಲಿರುವ ಬಿ.ವಿ.ಎ. ಪದವಿಯ VII ಸೆಮಿಸ್ಟರ್‌ಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ನವೀನ & ಪೂರಕ) ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

ಉಲ್ಲೇಖ : ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:21.01.2026

* * * * * *

2025-26 ನೇ ಶೈಕ್ಷಣಿಕ ಸಾಲಿನ 2026 ರ ಫೆಬ್ರವರಿ ಮಾಹೆಯಲ್ಲಿ ನಡೆಯಲಿರುವ ಬಿ.ವಿ.ಎ. ಪದವಿಯ VII ಸೆಮಿಸ್ಟರ್‌ಗೆ UUCMS ತಂತ್ರಾಂಶದ ಮೂಲಕ ಪ್ರವೇಶ ಪಡೆದಿರುವ (ಶೈಕ್ಷಣಿಕ ವಿಭಾಗದಿಂದ ಪ್ರವೇಶಾನುಮೋದನೆ ಪಡೆದಿರುವ ವಿದ್ಯಾರ್ಥಿಗಳಿಂದ) ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

**ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಸ್ಕೀಮ್ ಮತ್ತು ಸೆಮಿಸ್ಟರ್‌ವಾರು ವಿವರ**

| Scheme | Semester |
|---|---|
| BVA | VII Semester (Freshers & Repeaters) |

ಎಲ್ಲಾ ಕಾಲೇಜಿನ ಪ್ರಾಂಶುಪಾಲರು UUCMS ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸಿ, ವಿದ್ಯಾರ್ಥಿಗಳಿಂದ ಭರ್ತಿ ಮಾಡಲಾಗಿರುವ ಅರ್ಜಿ ನಮೂನೆಯನ್ನು ಪರಿಶೀಲಿಸಿ UUCMS ತಂತ್ರಾಂಶದ ಮೂಲಕ ಅಂಗೀಕರಿಸುವುದು.

**ಗಮನಿಸಬೇಕಾದ ದಿನಾಂಕಗಳು**

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 02.02.2026 |
| 2. | ವಿದ್ಯಾರ್ಥಿಗಳಿಗೆ ರೂ 100-00/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 03.02.2026 |
| 3. | ವಿದ್ಯಾರ್ಥಿಗಳಿಗೆ ರೂ 500-00/- ಗಳ ವಿಶೇಷ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 05.02.2026 |
| 4. | ಪ್ರಾಂಶುಪಾಲರು ಯು.ಯು.ಸಿ.ಎಂ.ಎಸ್. ಲಾಗಿನ್‌ನಿಂದ ಪರೀಕ್ಷಾ ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಅರ್ಜಿಯನ್ನು ಪರಿಶೀಲಿಸಿ ಅನುಮೋದಿಸಲು ಕೊನೆಯ ದಿನಾಂಕ | 06.02.2026 |
| 5. | ಕಾಲೇಜಿನವರು UUCMS ನಲ್ಲಿ ಆಂತರಿಕ ಅಂಕಗಳನ್ನು ಹಾಗೂ ವಿದ್ಯಾರ್ಥಿಗಳ ಹಾಜರಾತಿ ಮಾಹಿತಿಗಳನ್ನು ನಮೂದಿಸಲು ಕೊನೆಯ ದಿನಾಂಕ | - |

| | | |
|---|---|---|
| 6. | ಕಾಲೇಜಿನವರು ವಿದ್ಯಾರ್ಥಿಗಳು UUCMS ಮೂಲಕ ಪಾವತಿಸಿರುವ ಪರೀಕ್ಷಾ ಶುಲ್ಕದ ವಿವರವನ್ನು (Hard Copies) ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 06.02.2026 |
| 7. | ಪ್ರವೇಶ ಪತ್ರವನ್ನು (Hallticket) UUCMS ತಂತ್ರಾಂಶದ ಮೂಲಕ ಪಡೆಯುವ ದಿನಾಂಕ | 07.02.2026 |
| 8. | ಸೈದ್ಧಾಂತಿಕ ಪರೀಕ್ಷೆಗಳನ್ನು ಪ್ರಾರಂಭಿಸುವ ದಿನಾಂಕ | 13.02.2026 |

**ಪರೀಕ್ಷಾ ಶುಲ್ಕ ವಿವರ**

| ಸೆಮಿಸ್ಟರ್ | ಕೋರ್ಸ್ | ಪರೀಕ್ಷಾ ಶುಲ್ಕ (ನವೀನ) | ಸೈದ್ಧಾಂತಿಕ ಪೂರಕ (ಒಂದು ವಿಷಯಕ್ಕೆ) |
|---|---|---|---|
| **VII** | **B.V.A** | **ರೂ. 1,100/-** | **ರೂ. 100/-** |

**ವಿಶೇಷ ಸೂಚನೆ:**

ಒಂದಕ್ಕಿಂತ ಹೆಚ್ಚು ಪರೀಕ್ಷೆ ತೆಗೆದುಕೊಳ್ಳುವ **ವಿದ್ಯಾರ್ಥಿಗಳಿಂದ ಪ್ರತಿ ಸೆಮಿಸ್ಟರ್‌ಗೆ "ಪರೀಕ್ಷಾ ಸಿದ್ಧತಾ ಶುಲ್ಕ" ರೂ. 35-00/- (ಮೂವತ್ತೈದು ರೂಪಾಯಿಗಳು ಮಾತ್ರ) ಗಳನ್ನು ಬಾಹ್ಯವಾಗಿ ಸ್ವೀಕರಿಸಿ ದಿನಾಂಕ:10.02.2026 ರೊಳಗೆ "ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು"** ಇವರ ಎಸ್.ಬಿ.ಐ. ಖಾತೆ ಸಂಖ್ಯೆ **36954908103** ಗೆ NEFT/RTGS ಮುಖಾಂತರ ಪಾವತಿಸಿ, ಸಂಬಂಧಿಸಿದ ದಾಖಲೆ ಹಾಗೂ ವಿವರಗಳೊಂದಿಗೆ ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಸಲ್ಲಿಸಲು ತಿಳಿಸಿದೆ.

2025-26 ನೇ ಸಾಲಿನಲ್ಲಿ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ಪ್ರವೇಶ ಪಡೆದು ಏಳನೇ (ನವೀನ & ಪೂರಕ) ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸುವಂತೆ ಹಾಗೂ ಸದರಿಯವರು ವ್ಯಾಸಂಗ ಮಾಡುತ್ತಿರುವ ಅನುಮೋದಿತ ಪತ್ರಿಕೆ/ವಿಷಯಗಳ ವಿವರಗಳನ್ನು ಸರಿಯಾಗಿ ಪರಿಶೀಲಿಸುವಂತೆ ತಿಳಿಸಿ ಸೂಚನಾ ಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

**ವಿದ್ಯಾರ್ಥಿಗಳು ಈ ಕೆಳಗೆ ನಮೂದಿಸಿರುವ ಇತರೆ ಶುಲ್ಕಗಳನ್ನೂ ಸಹ ಕಡ್ಡಾಯವಾಗಿ ಪಾವತಿಸುವುದು.**

| ಕ್ರ.ಸಂ. | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | 156-00 |
| 2. | ಪರೀಕ್ಷಾ ಸಿದ್ಧತಾ ಶುಲ್ಕ (Processing fee) (ಪ್ರತಿ ಸೆಮಿಸ್ಟರ್‌ಗೆ) | 70-00 |

ಪರೀಕ್ಷಾ ಕೇಂದ್ರ ಹೊಂದಿರುವ ಕಾಲೇಜಿನವರು ತಮ್ಮ ಕೇಂದ್ರದಲ್ಲಿ ಪರೀಕ್ಷೆ ನಡೆಯುವ ಒಟ್ಟು ದಿನಗಳಲ್ಲಿ ಒಂದು ದಿನದ ಗರಿಷ್ಠ ವಿದ್ಯಾರ್ಥಿಗಳ ಸಂಖ್ಯೆಯನ್ನು ನಮೂದಿಸಿ ಪ್ರತಿ ವಿದ್ಯಾರ್ಥಿಗೆ ರೂ. 06-00/- ಗಳಂತೆ ಪ್ರತ್ಯೇಕ ಬಿಲ್ಲನ್ನು ಸಿದ್ಧಪಡಿಸಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವುದು.

ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ. ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

ವಿಶ್ವವಿದ್ಯಾನಿಲಯದಿಂದ ಪ್ರವೇಶಾನುಮೋದನೆ ಪಡೆದ ಎಲ್ಲಾ ಅರ್ಹ ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕವನ್ನು UUCMS ತಂತ್ರಾಂಶದ ಮೂಲಕ ನಿಗದಿತ ದಿನಾಂಕದೊಳಗೆ ಪಾವತಿಸುವುದು. ಕಾಲೇಜಿನವರು ಪರೀಕ್ಷಾ ಶುಲ್ಕ ಪಾವತಿಸಿರುವ ಪಟ್ಟಿಯನ್ನು ದ್ವಿ–ಪ್ರತಿಗಳಲ್ಲಿ (ಪರೀಕ್ಷಾ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಮತ್ತೊಂದು ಪ್ರತಿ) ಈ ಹಿಂದಿನ ನಮೂನೆಯಲ್ಲಿ ಭರ್ತಿ ಮಾಡಿ ತಪ್ಪದೇ ಸಲ್ಲಿಸುವುದು.

**ಸೈದ್ಧಾಂತಿಕ ಮತ್ತು ಪ್ರಾಯೋಗಿಕ ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.**

**ಆಂತರಿಕ ಅಂಕಗಳನ್ನು ಸಲ್ಲಿಸುವ ಕುರಿತು ಸೂಚನೆಗಳು :**

1. ಸೈದ್ಧಾಂತಿಕ (Theory) ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ಆಂತರಿಕ ಅಂಕಗಳನ್ನು ಮತ್ತು ವಿದ್ಯಾರ್ಥಿಗಳ ಹಾಜರಾತಿ ವಿವರಗಳನ್ನು ಕಾಲೇಜಿನವರು ನಮೂದಿಸುವುದು ಹಾಗೂ ಪರಿಶೀಲಿಸಿ ಅನುಮೋದಿಸುವುದು ಹಾಗೂ ಪಟ್ಟಿಯನ್ನು (Hard copy) **"ಮಾನ್ಯ ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು"** ಇವರ ಹೆಸರಿಗೆ ಪರೀಕ್ಷಾ ವಿಭಾಗದ ಟಪಾಲ್ (Dispatch) ನಲ್ಲಿ ಸಲ್ಲಿಸುವುದು.
2. ಆಂತರಿಕ ಅಂಕಗಳನ್ನು UUCMS ತಂತ್ರಾಂಶದಲ್ಲಿ ನಮೂದಿಸುವ ಮುನ್ನ ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು ಸರಿಯಾಗಿ ಪರಿಶೀಲಿಸಿ ನಮೂದಿಸಿದ ನಂತರ ಪ್ರಾಂಶುಪಾಲರು ಪರಿಶೀಲಿಸಿ ದೃಢೀಕರಿಸಿ ಸಲ್ಲಿಸುವುದು. ಸಲ್ಲಿಸುವಾಗ ವಿಳಂಭವಾದಲ್ಲಿ/ಸರಿಯಾಗಿ ನೀಡದಿದ್ದಲ್ಲಿ ದಿನವೊಂದಕ್ಕೆ ರೂ.1,000/– ಗಳಂತೆ ಗರಿಷ್ಠ ರೂ. 10,000/– (ಹತ್ತು ಸಾವಿರ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.
3. ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರ ಜವಾಬ್ದಾರಿಯಾಗಿದ್ದು, ಯಾವುದೇ ರೀತಿಯ ತಪ್ಪುಗಳಾಗದಂತೆ ಎಚ್ಚರಿಕೆ ವಹಿಸುವುದು.
4. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ.

**ಆದೇಶದ ಮೇರೆಗೆ**

2/1/01

**ಕುಲಸಚಿವರು (ಪರೀಕ್ಷಾಂಗ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

**ಪ್ರಾಂಶುಪಾಲರು, ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯ, ತುಮಕೂರು – 572 102**

**ಪ್ರತಿಗಳು:**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಇಂದೇ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳಿಗೆ ಇಮೇಲ್ ಕಳುಹಿಸುವುದು.
6. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.